# Prime Minister's Departure Statement ahead of his visit to Germany and UAE (June 26-28, 2022)

June 25, 2022

---

## ಜರ್ಮನಿ ಮತ್ತು ಯುಎಇಗೆ ಭೇಟಿ ನೀಡುವ ಮುನ್ನ ಪ್ರಧಾನ ಮಂತ್ರಿಗಳ ಪ್ರವಾಸ ಪೂರ್ವ ಹೇಳಿಕೆ (ಜೂನ್ 26-28, 2022).

**ಜೂನ್ 25, 2022**

ನಾನು ಜರ್ಮನಿಯ ಚಾನ್ಸೆಲರ್ ಗೌರವಾನ್ವಿತ ಶ್ರೀ ಓಲಾಫ್ ಸ್ಕೋಲ್ಜ್, ಅವರ ಆಹ್ವಾನದ ಮೇರೆಗೆ ಜರ್ಮನಿಯ ಶ್ಲೋಸ್ ಎಲ್ಮೌಗೆ ಭೇಟಿ ನೀಡಲಿದ್ದೇನೆ. ಜರ್ಮನ್ ಅಧ್ಯಕ್ಷತೆಯಲ್ಲಿ ನಡೆಯುವ ಜಿ 7 ಶೃಂಗಸಭೆಗಾಗಿ ಅಲ್ಲಿಗೆ ತೆರಳುತ್ತಿದ್ದೇನೆ. ಕಳೆದ ತಿಂಗಳು ಭಾರತ–ಜರ್ಮನಿ ಅಂತರ–ಸರ್ಕಾರಿ ಸಮಾಲೋಚನೆಗಳ (ಐ.ಜಿ.ಸಿ.) ಯಶಸ್ಸಿನ ನಂತರ ಮತ್ತೊಮ್ಮೆ ಚಾನ್ಸೆಲರ್ ಸ್ಕೋಲ್ಜ್ ಅವರನ್ನು ಭೇಟಿಯಾಗಲು ನನಗೆ ಬಹಳ ಸಂತೋಷವಿದೆ.

ಮಾನವೀಯತೆಯ ಮೇಲೆ ಪ್ರಭಾವ ಬೀರುವ ಪ್ರಮುಖ ಜಾಗತಿಕ ವಿಷಯಗಳ ಕುರಿತು ಅಂತರರಾಷ್ಟ್ರೀಯ ಸಹಯೋಗವನ್ನು ಬಲಪಡಿಸುವ ಪ್ರಯತ್ನದಲ್ಲಿ, ಜರ್ಮನಿಯು ಇತರ ಗಣರಾಜ್ಯಗಳಾದ ಅರ್ಜೆಂಟೀನಾ, ಇಂಡೋನೇಷ್ಯಾ, ಸೆನೆಗಲ್ ಮತ್ತು ದಕ್ಷಿಣ ಆಫ್ರಿಕಾಗಳನ್ನು ಜಿ7 ಶೃಂಗಸಭೆಗೆ ಆಹ್ವಾನಿಸಿದೆ. ಶೃಂಗಸಭೆಯ ಅಧಿವೇಶನಗಳಲ್ಲಿ, ನಾನು ಜಿ7 ದೇಶಗಳ ಜೊತೆ ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳುತ್ತೇನೆ. ಜಿ 7 ಪಾಲುದಾರ ರಾಷ್ಟ್ರಗಳು ಮತ್ತು ಪರಿಸರ, ಇಂಧನ, ಹವಾಮಾನ, ಆಹಾರ ಭದ್ರತೆ, ಆರೋಗ್ಯ, ಭಯೋತ್ಪಾದನೆ ನಿಗ್ರಹ, ಲಿಂಗ ಸಮಾನತೆ ಮತ್ತು ಪ್ರಜಾಪ್ರಭುತ್ವದಂತಹ ವಿಷಯಗಳ ಕುರಿತ ಸಮಾಲೋಚನೆಗಳನ್ನು ನಡೆಸಲಿದ್ದೇನೆ. ಅಂತರರಾಷ್ಟ್ರೀಯ ಸಂಸ್ಥೆಗಳು. ಶೃಂಗಸಭೆಯ ನೇಪಥ್ಯದಲ್ಲಿ ಕೆಲವು ಜಿ 7 ಮತ್ತು ಅತಿಥಿ ರಾಷ್ಟ್ರಗಳ ನಾಯಕರನ್ನು ಭೇಟಿಯಾಗುವುದನ್ನೂ ನಾನು ಎದುರು ನೋಡುತ್ತಿದ್ದೇನೆ.

ಜರ್ಮನಿಯಲ್ಲಿರುವಾಗ, ಅವರ ಸ್ಥಳೀಯ ಆರ್ಥಿಕತೆಗಳಿಗೆ ಅಪಾರ ಕೊಡುಗೆ ನೀಡುತ್ತಿರುವ ಮತ್ತು ಯುರೋಪಿಯನ್ ರಾಷ್ಟ್ರಗಳೊಂದಿಗಿನ ನಮ್ಮ ಸಂಬಂಧಗಳನ್ನು ಶ್ರೀಮಂತಗೊಳಿಸುತ್ತಿರುವ ಯೂರೋಪಿನಾದ್ಯಂತದ ಭಾರತೀಯ ಜನಸಮೂಹದ ಸದಸ್ಯರನ್ನು ಭೇಟಿ ಮಾಡುವುದನ್ನೂ ನಾನು ಕಾಯುತ್ತಿರುತ್ತೇನೆ.

ನಾನು ಭಾರತಕ್ಕೆ ಹಿಂತಿರುಗುವ ಹಾದಿಯಲ್ಲಿ, ಯುಎಇಯ ಅಬುಧಾಬಿಯಲ್ಲಿ ಅಲ್ಪ ಕಾಲ ತಂಗಲಿದ್ದೇನೆ. ಯುಎಇಯ ಮಾಜಿ ಅಧ್ಯಕ್ಷ ಮತ್ತು ಅಬುಧಾಬಿಯ ಆಡಳಿತಗಾರ ಶೇಖ್ ಖಲೀಫಾ ಬಿನ್ ಜಾಯೆದ್ ಅಲ್ ನಹ್ಯಾನ್ ಅವರ ನಿಧನಕ್ಕೆ ನನ್ನ ವೈಯಕ್ತಿಕ ಸಂತಾಪವನ್ನು ತಿಳಿಸಲು 2022 ರ ಜೂನ್ 28ರಂದು ಯುಎಇ ಅಧ್ಯಕ್ಷ ಮತ್ತು ಅಬುಧಾಬಿಯ ಆಡಳಿತಗಾರ ಗೌರವಾನ್ವಿತ ಶೇಖ್ ಮೊಹಮ್ಮದ್ ಬಿನ್ ಝಾಯೆದ್ ಅಲ್ ನಹ್ಯಾನ್ ಅವರನ್ನು ಭೇಟಿ ಮಾಡಲಿದ್ದೇನೆ.

ನವದೆಹಲಿ

**ಜೂನ್ 25, 2022**

DISCLAIMER: This is an approximate translation. The original is available in English on MEA's website and may be referred to as the official press release.